# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.616–2017** **ಡಿ . ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆಯ/ಗಂಡನ ಹೆಸರು<br>ವಯಸ್ಸು<br>ಉದ್ಯೋಗ<br>ವಾಸ್ತವ್ಯ | ಪ್ರಸಾದ್ ಎನ್.ಎಸ್<br>ಲೇ.ಶಿವಪ್ರಸಾದ್ @ ರಾಜು<br>42 ವರ್ಷ<br>ಖಾಸಗಿ ಉದ್ಯೋಗಿ<br>ನೇರಳೇ ಗ್ರಾಮ, ನಂಜನಗೂಡು ತಾ. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ** 06–12–2024. |

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಾದ ಶ್ರೀ ಎ.ಎಂ.ಎಸ್ ರವರಿಂದಃ–**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.

ಹಕ್ಕುಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಡಿ–2 ಎಂದು, ಡಿಮ್ಯಾಂಡ್ ರಿಜಿಸ್ಟರ್ ಎಕ್ಸ್ ಟ್ರ್ಯಾಕ್ಟ್ ನ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ–3 ರಿಂದ 5 ಎಂದು, ಕಂದಾಯ ಪಾವತಿ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ–6 ಎಂದು, ಮಾಹಿತಿ ಹಕ್ಕು ಅಧಿನಿಯಮದಡಿ ಮಾಹಿತಿ ಕೋರಿರುವ ಕುರಿತು ಪಂಚಾಯ್ತಿ ಅಭಿವೃದ್ಧಿ ಆಧಿಕಾರಿ ನೇರಳೆ ಗ್ರಾಮ ಪಂಚಾಯ್ತಿ ರವರು ನೀಡಿರುವ ಹಿಂಬರಹಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ–7 ಮತ್ತು 8

ಎಂದು, ನಿವೇಶನವನ್ನು ಅಳತೆ ಮಾಡಿ ಹದ್ದುಬಸ್ತು ಮಾಡಿಕೊಡಲು ಕೋರಿ ನಾನು ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ರವರಿಗೆ ನೀಡಿರುವ ಅರ್ಜಿಯ ಸ್ವೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-9 ಎಂದು, ಖಾಲಿ ಜಾಗದಲ್ಲಿ ಶೌಚಾಲಯ ನಿರ್ಮಿಸುತ್ತಿರುವುದನ್ನು ತಡೆಯುವ ಬಗ್ಗೆ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ರವರಿಗೆ ನೀಡಿರುವ ಅರ್ಜಿಯ ಸ್ವೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-10 ಎಂದು, ಅಂಚೆ ಸ್ವೀಕೃತಗನ್ನು ಹಾಜರುಪಡಿಸಿದ್ದು ಅವುಗಳನ್ನ ನಿಡಿ-11 ರಿಂದ 13 ಎಂದು ಗುರುತಿಸಲಾಯಿತು.

(ಮುಂದುವರಿದ ಮುಖ್ಯ ವಿಚಾರಣೆಗೆ ವಕೀಲರು ಸಮಯಾವಕಾಶವನ್ನು ಕೇಳಿರುವುದರಿಂದ ಸಮಯಾವಕಾಶವನ್ನು ನೀಡಲಾಯಿತು)

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**2 ನೇ ಪ್ರ.ದ. ನ್ಯಾ ದಂ. ನಂಜನಗೂಡು**